ಪದವಿ ಕಾಲೇಜುಗಳ ಮಂಜೂರಾತಿ

161(304); ಶ್ರೀ ಐಹೋಳೆ ಡಿ. ಮಹಾಲಿಂಗಪ್ಪ (ರಾಯಭಾಗ)

ಅ) ಪ್ರಸ್ತುತ ಸಾಲಿನಲ್ಲಿ ರಾಜ್ಯದಲ್ಲಿ ಹೊಸದಾಗಿ ಮಂಜೂರಾತಿ ನೀಡಿರುವ ಸರ್ಕಾರಿ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು (ಜಿಲ್ಲಾ ಮತ್ತು ತಾಲ್ಲೂಕುವಾರು ವಿವರ ನೀಡುವುದು);

ಆ) ಬೆಳಗಾವಿ ಜಿಲ್ಲೆ ರಾಯಭಾಗ ತಾಲ್ಲೂಕಿನ ಪದವಿ ಕಾಲೇಜಿನಲ್ಲಿ ಹೆಚ್ಚುವರಿ ಕೊಠಡಿಗಳಿಲ್ಲದಿರುವುದು ಹಾಗೂ ಮೂಲಭೂತ ಸೌಕರ್ಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಸದರಿ ಕಾಲೇಜಿಗೆ ಹೆಚ್ಚುವರಿ ಕೊಠಡಿ ಹಾಗೂ ಮೂಲಭೂತ ಸೌಕರ್ಯಗಳನ್ನು ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಈ) ಹಾಗಿದ್ದಲ್ಲಿ, ಸೌಕರ್ಯಗಳನ್ನು ಒದಗಿಸಲು ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗುವುದು?

ಶ್ರೀ ಆರ್.ವಿ. ದೇಶಪಾಂಡೆ (ಮಾನ್ಯ ಉನ್ನತ ಶಿಕ್ಷಣ ಸಚಿವರು)

ಅ) ಪ್ರಸ್ತುತ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲ್ಲೂಕಿನ ಕನ್ಯಾನ ಈ ಸ್ಥಳದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜನ್ನು ಪ್ರಾರಂಭಿಸಲಾಗಿದೆ.

ಆ) ಬಂದಿದೆ

ಇ) ಸದರಿ ಕಾಲೇಜಿಗೆ ರೂ. **51.00** ಲಕ್ಷ ವೆಚ್ಚದಲ್ಲಿ 3 ತರಗತಿ ಕೊಠಡಿ ನಿರ್ಮಾಣಕ್ಕಾಗಿ ಹಾಗೂ ರೂ. **18.00** ಲಕ್ಷ ವೆಚ್ಚದಲ್ಲಿ **01** ಪ್ರಯೋಗಾಲಯ ನಿರ್ಮಾಣಕ್ಕಾಗಿ ಮಂಜೂರಾತಿ ನೀಡಿದ್ದು, ಜಿಲ್ಲಾ ನಿರ್ಮಿತಿ ಕೇಂದ್ರದ ಮೂಲಕ ಕಾಮಗಾರಿಯನ್ನು ನಿರ್ವಹಿಸಲು ಕಾರ್ಯದೇಶ ನೀಡಲಾಗಿದೆ.

ಈ) ಅಂದಾಜು ಮೊತ್ತದ ಶೇ.30%ರಷ್ಟು ಅನುದಾನವನ್ನು ಬಿಡುಗಡೆ ಮಾಡಲು ಕ್ರಮವಹಿಸಲಾಗುವುದು.

ಶಿಕ್ಷಕರು ಮತ್ತು ಸಿಬ್ಬಂದಿಗಳ ಕೊರತೆ

163(565); ಶ್ರೀ ಅಖಂಡ ಶ್ರೀನಿವಾಸಮೂರ್ತಿ ಆರ್. (ಪುಲಕೇಶಿ ನಗರ)

ಅ) ಪುಲಕೇಶಿ ನಗರ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಸರ್ಕಾರಿ ಶಾಲೆಗಳಲ್ಲಿ ಕೊರತೆ ಇರುವ ಶಿಕ್ಷಕರು ಹಾಗೂ ಸಿಬ್ಬಂದಿಗಳ ಸಂಖ್ಯೆ ಎಷ್ಟು (ಮಾಹಿತಿ ನೀಡುವುದು);

ಆ) ಶಿಕ್ಷಕರ ಹಾಗೂ ಸಿಬ್ಬಂದಿಗಳ ಕೊರತೆಯಿಂದ ಮಕ್ಕಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಶಿಕ್ಷಕರು ಹಾಗೂ ಸಿಬ್ಬಂದಿಯ ಕೊರತೆಯನ್ನು ನೀಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಈ) ಹಾಗಿದ್ದಲ್ಲಿ ಯಾವ ಕಾಲಾವಧಿಯಲ್ಲಿ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಕಿಮ್ಮನೆ ರತ್ನಾಕರ್ (ಪ್ರಾಥಮಿಕ & ಪೌಢ ಶಿಕ್ಷಣ ಸಚಿವರು)

ಅ) ಬೋಧಕ: 11

ಬೋಧಕೇತರ: 03

ಆ) ಬಂದಿದೆ.

ಇ) ಕೊರತೆಯನ್ನು ನೀಗಿಸಲು ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡಲಾಗಿದೆ ಮತ್ತು ಖಾಲಿ ಹುದ್ದೆಗಳಿಗೆ ಹೆಚ್ಚುವರಿ ಶಿಕ್ಷಕರನ್ನು ಸ್ಥಳಾಂತರಿಸುವ ಮೂಲಕ ಭರ್ತಿ ಮಾಡಲಾಗಿದೆ.

ಈ) ಅನ್ವಯಿಸುವುದಿಲ್ಲ.